ಆರ್.ಟಿ.ಇ ಯೋಜನೆಯಡಿ ಅನುದಾನಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ದೊರೆಯುವ ಸೌಲಭ್ಯಗಳು

2537(2741); ಶ್ರೀ ಬಾಲಕೃಷ್ಣ ಸಿ.ಎನ್. (ಶ್ರವಣಬೆಳಗೊಳ)

ಅ) ರಾಜ್ಯದಲ್ಲಿ ಕಡ್ಡಾಯ ಶಿಕ್ಷಣ ಹಕ್ಕು ಕಾಯಿದೆ–(ಆರ್.ಟಿ.ಇ) ಯೋಜನೆಯಡಿ ಖಾಸಗಿ ಹಾಗೂ ಅನುದಾನಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಪ್ರಸ್ತುತ ಸರ್ಕಾರದಿಂದ ದೊರೆಯುತ್ತಿರುವ ಸೌಲಭ್ಯಗಳೇನು?

ಆ) ಈ ಮಕ್ಕಳಿಗೆ ಪಠ್ಯಪುಸ್ತಕ ಹಾಗೂ ಇನ್ನಿತರೆ ಸೌಲಭ್ಯಗಳನ್ನು ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಇ) ಹಾಗಿದ್ದಲ್ಲಿ ಅತ್ಯಂತ ಹಿಂದುಳಿದ ವರ್ಗದ ಕುಟುಂಬದ ಮಕ್ಕಳಿಗೆ ಉಚಿತ ಶಿಕ್ಷಣ ಸೌಲಭ್ಯ ನೀಡಿರುವ ಜೊತೆಗೆ ಸರ್ಕಾರ ಪಠ್ಯಪುಸ್ತಕ ಮತ್ತು ಸಮವಸ್ತ್ರ ನೀಡಲು ಕ್ರಮ ಕೈಗೊಳ್ಳುವುದು.

ಈ) ಖಾಸಗಿ ಶಾಲೆಗಳಲ್ಲಿ ಈ ಯೋಜನೆಯಡಿ ವ್ಯಾಸಂಗ ಮಾಡುತ್ತಿರುವ ಮಕ್ಕಳ ಪೋಷಕರಿಂದ ಪಠ್ಯಪುಸ್ತಕ ಹಾಗೂ ಸಮವಸ್ತ್ರಗಳಿಗಾಗಿ ಶುಲ್ಕ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಉ) ಹಾಗಿದ್ದಲ್ಲಿ, ಈ ಅಕ್ರಮ ದಂಧೆಯನ್ನು ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಕಿಮ್ಮನೆ ರತ್ನಾಕರ್ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ರಾಜ್ಯದಲ್ಲಿ ಅನುದಾನಿತ ಶಾಲೆಗಳಲ್ಲಿ ಎಲ್ಲಾ ಮಕ್ಕಳಿಗೆ ಸರ್ಕಾರಿ ಶಾಲೆಗಳಲ್ಲಿರುವಂತೆ ಉಚಿತ ಪಠ್ಯಪುಸ್ತಕ ಹಾಗೂ ಅಕ್ಷರ ದಾಸೋಹ, ಕ್ಷೀರಭಾಗ್ಯ ಮುಂತಾದ ಸೌಲಭ್ಯವನ್ನು ಒದಗಿಸಲಾಗುತ್ತಿದೆ.

ಅನುದಾನರಹಿತ ಶಾಲೆಗಳಲ್ಲಿನ ಪ್ರಾರಂಭಿಕ ತರಗತಿಯಲ್ಲಿನ ಶೇ.25ರಷ್ಟು ಸೀಟುಗಳನ್ನು ಆ ಶಾಲೆಯ ನೆರೆಹೊರೆಯಲ್ಲಿ ವಾಸಿಸುವ ಅನಾನುಕೂಲ ಪರಿಸ್ಥಿತಿಯಲ್ಲಿರುವ ಮತ್ತು ದುರ್ಬಲ ವರ್ಗದ ಮಕ್ಕಳಿಗೆ ಉಚಿತ ಪ್ರವೇಶ ನೀಡಲಾಗುತ್ತಿದೆ.

ಖಾಸಗಿ ಅನುದಾನ/ಖಾಸಗಿ ಅನುದಾನ ರಹಿತ ಶಾಲೆಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ತನ್ನದೇ ಆದ ಸವಲತ್ತುಗಳನ್ನು ಒದಗಿಸಿರುವುದರಿಂದ ಖರ್ಚಿನ ಸರಾಸರಿ ಮೊಬಲಗು ಬಿನ್ನವಾಗಿರುತ್ತದೆ. ಆದ್ದರಿಂದ ಈ ಮಕ್ಕಳಿಗೆ ತಗಲುವ ವೆಚ್ಚವನ್ನು ಮಧ್ಯಾಹ್ನ ಉಪಾಹಾರ ಯೋಜನೆ ಹೊರತುಪಡಿಸಿ ಉಳಿದ ಸೌಲಭ್ಯಗಳಿಗೆ ಸರ್ಕಾರಿ ಮತ್ತು ಅನುದಾನಿತ ಶಾಲಾ ಮಕ್ಕಳಿಗೆ ನೀಡುವ ಸೌಲಭ್ಯಗಳಂತೆ ಲೆಕ್ಕ ಹಾಕಿ ಹಿಂದಿರುಗಿಸಲಾಗುತ್ತಿದೆ.

ಆ) ಇಲ್ಲ

ಇ) ಉದ್ಭವಿಸುವುದಿಲ್ಲ

ಈ) ಬಂದಿದೆ

ಉ) ಶಿಕ್ಷಣ ಹಕ್ಕು ಕಾಯ್ದೆ ಅಡಿ ಪ್ರವೇಶ ಪಡೆದ ಮಕ್ಕಳಿಂದ ಶುಲ್ಕ ನಿಷೇಧಕ್ಕೆ ಸಂಬಂಧಿಸಿದಂತೆ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರು ಸುತ್ತೋಲೆ ಹೊರಡಿಸಿದ್ದು, ಆ ಸೂಚನೆಗಳನ್ನು ಖಾಸಗಿ ಅನುದಾನ ರಹಿತ ಶಾಲಾ ಆಡಳಿತ ಮಂಡಳಿಗಳು ಕಡ್ಡಾಯವಾಗಿ ಪಾಲನೆ ಮಾಡುವಂತೆ ಸೂಚಿಸಲಾಗಿದೆ. ಈ ಸೂಚನೆಗಳನ್ನು ಕ್ಷೇತ್ರ ಮಟ್ಟದ ಅಧಿಕಾರಿಗಳು ಕಟ್ಟುನಿಟ್ಟಾಗಿ ಜಾರಿಗೆ ತರಲು ಕ್ರಮ ವಹಿಸಲು ಸೂಚಿಸಿದೆ.